ಅ) ಪ್ರಭಾರ ಹುದ್ದೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದ ಪ್ರಾಂಶುಪಾಲರುಗಳ ಸಂಖ್ಯೆ ಎಷ್ಟು? ಎಷ್ಟು ವರ್ಷಗಳಿಂದ ಅವರುಗಳು ಪ್ರಭಾರ ಹುದ್ದೆಯಲ್ಲಿ ಮುಂದುವರೆಯುತ್ತಿದ್ದಾರೆ;

ಇ) ಪ್ರಭಾರ ಹುದ್ದೆಯಲ್ಲಿ ಕರ್ತವ್ಯನಿರತರಾದವರನ್ನು ಖಾಯಂಗೊಳಿಸಲು ಸಕಾಲಿಕ ಕ್ರಮವನ್ನು ಸರ್ಕಾರವು ಜರುಗಿಸುವುದೇ?

ಡಾ: ಜಿ. ಪರಮೇಶ್ವರ (ಉನ್ನತ ಶಿಕ್ಷಣ ಸಚಿವರು) :—

ಅ) ಸರ್ಕಾರಿ ಪಾಲಿಟೆಕ್ನಿಕ್‌ಗಳ ಸಂಖ್ಯೆ 38 ಪ್ರಾಂಶುಪಾಲರ ಹುದ್ದೆಗಳು ಭರ್ತಿಯಾಗಿರುವುದಿಲ್ಲ. ದಿನಾಂಕ 24-02-2000 ಸಂಖ್ಯೆ ಇಡಿ: 14 ಡಿಟಿಇ 98ರ ಸರ್ಕಾರಿ ಆದೇಶದಲ್ಲಿ ಪ್ರಾಂಶುಪಾಲರ ಹುದ್ದೆಗಳನ್ನು ಎಐಸಿಟಿಇ ವೇತನ ಶ್ರೇಣಿಯಲ್ಲಿ ಸೃಜಿಸಲಾಗಿರುವುದರಿಂದ ಮುಂಬಡ್ತಿ ಮೂಲಕ ಪ್ರಾಂಶುಪಾಲರ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.

ಆ) ಇಲ್ಲ, ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಎಸ್.ಎಸ್.ಎಲ್.ಸಿ. ಮೌಲ್ಯಮಾಪನದಲ್ಲಿನ ಅವ್ಯವಹಾರಗಳು

2556(2974) ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು (ಶಿವಾಜಿನಗರ) :— ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಕಳೆದ ಮಾರ್ಚ್-ಎಪ್ರಿಲ್‌ನಲ್ಲಿ ನಡೆದ ಎಸ್.ಎಸ್.ಎಲ್.ಸಿ. ಪರೀಕ್ಷೆಗೆ ಕುಳಿತ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು;

ಆ) ಈ ಪರೀಕ್ಷೆಯ ಮೌಲ್ಯಮಾಪನದಲ್ಲಿ ವ್ಯಾಪಕ ಅವ್ಯವಹಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಕೆಲವು ಪ್ರಶ್ನೆ ಪತ್ರಿಕೆಗಳು ಬಯಲಾಗಿದ್ದು, ಅದರಿಂದ ವಿದ್ಯಾರ್ಥಿಗಳಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಈ ಅವ್ಯವಹಾರಗಳ ಬಗ್ಗೆ ಸರ್ಕಾರ ವಿಚಾರಣೆ ನಡೆಸಿದೆಯೇ;

ಉ) ಇನ್ನು ಮುಂದೆ ಇಂತಹ ಅವ್ಯವಹಾರಗಳನ್ನು ತಡೆಗಟ್ಟಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು?

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :—

ಅ) ಒಟ್ಟು ೬,೭೩,೦೫೧ ಹಾಜರಾಗಿರುತ್ತಾರೆ.

ಆ) ಮೌಲ್ಯಮಾಪನದಲ್ಲಿ ಅವ್ಯವಹಾರಗಳು ನಡೆದಿರುವುದಿಲ್ಲ. ಆದರೆ ಕರ್ತವ್ಯಲೋಪವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದ್ದು, ಕರ್ತವ್ಯಲೋಪಕ್ಕೆ ಕಾರಣರಾದವರ ವಿರುದ್ಧ ನಿಯಮಗಳನ್ವಯ ಕ್ರಮ ಜರುಗಿಸಲಾಗಿದೆ.

ಇ), ಈ) ಪ್ರಶ್ನೆ ಪತ್ರಿಕೆ ಬಯಲಾಗಿರುವ ಬಗ್ಗೆ ಸತ್ಯತೆಯನ್ನು ಖಚಿತಪಡಿಸಿಕೊಳ್ಳಲು ಪ್ರಕರಣವನ್ನು ಸಿ.ಓ.ಡಿ. ತನಿಖೆಗೆ ಒಳಪಡಿಸಲಾಗಿದೆ.

ಈ) ಈ ರೀತಿಯ ಗೊಂದಲಗಳನ್ನು ಶಾಶ್ವತವಾಗಿ ತಡೆಗಟ್ಟಲು ಹಾಗು ಪರೀಕ್ಷಾ ಪದ್ಧತಿಯ ಲೋಪದೋಷಗಳನ್ನು ತಡೆಗಟ್ಟಲು ಹಾಗು ಪರೀಕ್ಷಾ ಪದ್ಧತಿಯನ್ನು ಸುಧಾರಿಸುವ ಸಲುವಾಗಿ ಉನ್ನತ ಮಟ್ಟದ ಸಮಿತಿಯನ್ನು ರಚಿಸಲಾಗಿದೆ.

ರಾಜ್ಯದಲ್ಲಿ ಹೊಸದಾಗಿ ಪ್ರಾರಂಭಿಸಿರುವ ವೈದ್ಯಕೀಯ ಹಾಗೂ ದಂತ ಕಾಲೇಜುಗಳು

2558 (2976) ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು (ಶಿವಾಜಿನಗರ) :— ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ರಾಜ್ಯದಲ್ಲಿ ಈಗಿರತಕ್ಕ ಸರ್ಕಾರಿ ಹಾಗೂ ಖಾಸಗಿ ವೈದ್ಯಕೀಯ ಹಾಗೂ ದಂತ ಕಾಲೇಜುಗಳ ಸಂಖ್ಯೆ ಎಷ್ಟು?

ಆ) ಈ ಕಾಲೇಜುಗಳಲ್ಲಿರತಕ್ಕ ಒಟ್ಟು ಸೀಟುಗಳೆಷ್ಟು?

ಇ) ಜನವರಿ ೨೦೦೦ ರಿಂದ ಇಲ್ಲಿಯವರೆಗೆ ಎಷ್ಟು ಹೊಸ ವೈದ್ಯಕೀಯ ಹಾಗೂ ದಂತ ಖಾಸಗೀ ಕಾಲೇಜುಗಳನ್ನು ತೆರೆಯಲು ರಾಜ್ಯ ಸರ್ಕಾರ ಅನುಮತಿ ನೀಡಿದೆ?

ಈ) ಇವುಗಳ ಪೈಕಿ, ೨೦೦೦-೨೦೦೨ನೇ ಸಾಲಿನಲ್ಲಿ ಎಷ್ಟು ಹೊಸ ಪ್ರಾರಂಭಿಸಲಾಗಿದೆ?

ಶ್ರೀಮತಿ ನಫೀಸ್ ಫಜಲ್ (ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು) :—

ಅ) ೧. ಸರ್ಕಾರಿ ವೈದ್ಯಕೀಯ ಕಾಲೇಜುಗಳು - ೪

೨. ಖಾಸಗೀ ವೈದ್ಯಕೀಯ ಕಾಲೇಜುಗಳು - ೨೦

೩. ಸರ್ಕಾರಿ ದಂತ ಕಾಲೇಜುಗಳು - ೧

೪. ಖಾಸಗೀ ದಂತ ಕಾಲೇಜುಗಳು - ೪೧